<u>ದಿನಾಂಕಃ 27-05-2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.</u>

**<u>ಪಾಟೀ ಸವಾಲುಃ ಶ್ರೀ ಡಿ ಬಿ ಟಿ ವಕೀಲರಿಂದ 2 ನೇ ಎದುರುದಾರ ಪರಃ</u>**

ನಮ್ಮ ಸ್ವಾಧೀನಪಡಿಸಿಕೊಂಡ ಜಮೀನು ಐನಾಪುರ ಗ್ರಾಮದಿಂದ 5-6 ಕಿಮೀ ದೂರದಲ್ಲಿದೆ ಎಂದರೆ ಸಾಕ್ಷಿಯು ಗ್ರಾಮಕ್ಕೆ ಹೊಂದಿಕೊಂಡಿದೆ ಎಂದು ನುಡಿಯುತ್ತಾರೆ. ಕೃಷಿ ಮಾಡುವಂತಹ ಜಮೀನನ್ನು ಸ್ವಾಧೀನಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ರಿಂದ 10 ಇವು ಸರ್ಕಾರದವರು ಮಂಜೂರು ಮಾಡಿದಂತಹ ಡೈರಿಗಳು ಎಂದರೆ ಸರಿ. ನಿಪಿ-15 ರಿಂದ 22 ರವರೆಗಿನ ದಾಖಲೆಗಳು ಕೃಷಿ ಜಮೀನಿಗೆ ಸಂಬಂಧಿಸಿದ ಜಮೀನುಗಳು ಅಲ್ಲ ಎಂದರೆ ಸರಿ.

ದಿಃ 21-12-2017 ರಂದು ನೋಟಿಸ ನೀಡಿದ ನಂತರ ನಮಗೆ ಯಾವುದೇ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶ ನೀಡಿಲ್ಲ ಎಂದರೆ ಸರಿ. ನನಗೆ ನೋಟಿಸ ಬಂದ ನಂತರ ತಕರಾರು ಅರ್ಜಿ ನೀಡಿರುತ್ತೇವೆ. ಭೂಸ್ವಾಧೀನಾಧಿಕಾರಿಗಳು ಬಂದು ಸರ್ವೆ ಮಾಡಿದ ಬಗ್ಗೆ ನಮಗೆ ಮಾಹಿತಿ ಇಲ್ಲ. ಈ ಬಗ್ಗೆ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕೋಷ್ಟಕ 2 ರಲ್ಲಿನ ಜಮೀನುಗಳನ್ನು ಪರಿಗಣಿಸಿ ನಮ್ಮ ಜಮೀನಿಗೆ ಯೋಗ್ಯ ಬೆಲೆ ನಿಗದಿಪಡಿಸಿರುತ್ತಾರೆ ಎಂದರೆ ಸರಿಯಲ್ಲ. 2014-2017 ರವರೆಗಿನ ಕೃಷಿ ಜಮೀನುಗಳ ಮಾರಾಟದ ದಾಖಲೆಗಳ ಆಧಾರದ ಮೇಲೆ ನಮಗೆ ಸರಿಯಾದ ಪರಿಹಾರ ನಿಗದಿಪಡಿಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಜಮೀನು ಕೃಷಿ ಜಮೀನಲ್ಲ ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿರುತ್ತೇವೆ ಎಂದರೆ ಸರಿ. ಈ ಬಗ್ಗೆ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಐನಾಪುರ ಪಂಚಾಯಿತಿ 50 ವರ್ಷಗಳ ಹಿಂದೆ ಪಟ್ಟಣ ಪಂಚಾಯತಿ ಆಗಿದೆ ಎಂದು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಿದ್ದೇಶ್ವರ ಗುಡಿಗೆ ಮತ್ತು ನಮ್ಮ ಜಮೀನಿಗೆ ಕೇವಲ ½ ಕಿಮೀ ಇದೆ ಎಂದರೆ ಸಾಕ್ಷಿಯು ಅದಕ್ಕಿಂತ ಕಡಿಮೆ ದೂರ ಇರುತ್ತದೆ ಎಂದು ನುಡಿಯುತ್ತಾರೆ. ನಮ್ಮ ಜಮೀನಿನಲ್ಲಿ ಅಂಗಡಿ ಮುಗ್ಗಟ್ಟುಗಳು ಇವೆ ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿರುತ್ತೇವೆ. ಈ ಬಗ್ಗೆ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ಜಮೀನಿನಲ್ಲಿ ನೀರಾವರಿ ಸೌಲಭ್ಯ ಇಲ್ಲ. ನಮ್ಮದು ಎನ್ ಎ ಜಮೀನಾಗಿರುತ್ತದೆ. ನಮ್ಮ ಜಮೀನು ವ್ಯವಸಾಯೇತರ ಉದ್ದೇಶಕ್ಕೆ ಬಳಸಲು ಯೋಗ್ಯವಿಲ್ಲ ಎಂದರೆ ಸರಿಯಲ್ಲ. ಭೂಸ್ವಾಧೀನ ಅಧಿಕಾರಿಗಳಿಂದ ನಿಗದಿ ಪಡಿಸಿದ

ಪರಿಹಾರ ಹಣವನ್ನು ಪಡೆದುಕೊಂಡು ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ನಾನು ಸುಳ್ಳು ದಾಖಲೆಗಳನ್ನು ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.
ಇನ್ನುಳಿದಂತೆ ಮಾನ್ಯ ಎಡಿಜಿಪಿರವರ ಪಾಟಿಸವಾಲನ್ನು ಅಳವಡಿಸಿಕೊಂಡಿರುತ್ತಾರೆ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ಉಕ್ತಲೇಖದ ಅನ್ವಯ ಬೆರಳಚ್ಚುಗಾರರು ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿ ಪಡೆದುಕೊಳ್ಳಲಾಯಿತು)

ಓ ಹೇ ಕೆ ಸರಿ ಇದೆ.

(ಕುಡವಕ್ಕಲಿಗೇರ ಎಂ ಜಿ)
1 ನೇ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ
ನ್ಯಾಯಾಧೀಶರು, ಬೆಳಗಾವಿ.